**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: 2016-17ನೇ ಸಾಲಿನ ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್ (ಆರ್.ಜಿ.ಪಿ.ಎಸ್.ಎ)/ಪಂಚಾಯತ್ ಸಶಕ್ತೀಕರಣ ಅಭಿಯಾನ್ (ಪಿ.ಎಸ್.ಎ) ಯೋಜನೆಯಡಿ ಜಿಲ್ಲಾ ಪಂಚಾಯತಿ ವ್ಯಾಪ್ತಿಯಲ್ಲಿ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರಗಳ ಸ್ಥಾಪನೆಗೆ ಅಂತಿಮ ಅನುದಾನ ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 139 ಜಿಪಸ 2012(ಪಿ-3) ದಿನಾಂಕ:25-07-2013.
2. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 139 ಜಿಪಸ 2012 ದಿನಾಂಕ:26-02-2014.
3. ಸರ್ಕಾದ ಆದೇಶ ಸಂಖ್ಯೆ: ಗ್ರಾಅಪ 139 ಜಿಪಸ 2012(ಪಿ-3) ದಿನಾಂಕ:18-07-2014.
4. ಸರ್ಕಾದ ಆದೇಶ ಸಂಖ್ಯೆ: ಗ್ರಾಅಪ 182 ಜಿಪಸ 2014(ಪಿ-2) ದಿನಾಂಕ:27-11-2014.
5. ಸರ್ಕಾದ ಆದೇಶ ಸಂಖ್ಯೆ: ಗ್ರಾಅಪ 73 ಜಿಪಸ 2015, ದಿನಾಂಕ: 06-10-2015.
6. ಭಾರತ ಸರ್ಕಾರದ ಆದೇಶ ಪತ್ರ ಸಂಖ್ಯೆ:ಕೆ-11011/48/2015-ಸಿ.ಬಿ, ದಿನಾಂಕ:22-12-2015.
7. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 62 ಜಿಪಸ 2016, ದಿನಾಂಕ:18-05-2016.
8. ಭಾರತ ಸರ್ಕಾರದ ಆದೇಶ ಪತ್ರ ಸಂಖ್ಯೆ:ಕೆ-11011/44/2016-ಸಿ.ಬಿ, ದಿನಾಂಕ:27-12-2016.

**ಪ್ರಸ್ತಾವನೆ:**

ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯವು ರಾಷ್ಟ್ರದಾದ್ಯಂತ ಅನುಷ್ಠಾನಗೊಳಿಸುತ್ತಿರುವ e-PANCHAYAT, ಪಂಚಾಯತ್ ಎಂಪವರ್‌ಮೆಂಟ್ ಅಂಡ್ ಅಕೌಂಟಬಿಲಿಟಿ ಇನ್ಸೆಂಟೀವ್ ಸ್ಕೀಮ್ (PEAIS) ಹಾಗೂ ಪಂಚಾಯತ್ ಮಹಿಳಾ ಏವಂ ಯುವಶಕ್ತಿ ಅಭಿಯಾನ (PMEYSA) ಯೋಜನೆಗಳಲ್ಲಿ ಅಳವಡಿಸಿಕೊಳ್ಳಲಾಗಿದ್ದ ಸಾಮರ್ಥ್ಯಾಭಿವೃದ್ಧಿ ಹಾಗೂ ತರಬೇತಿ ಕಾರ್ಯಕ್ರಮಗಳನ್ನು ಸಮ್ಮಿಳನಗೊಳಿಸಿ, ಪಂಚಾಯತ್ ರಾಜ್ ಸಂಸ್ಥೆಗಳನ್ನು ಮತ್ತು ಅದರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪಂಚಾಯತ್ ರಾಜ್ ಚುನಾಯಿತ ಪ್ರತಿನಿಧಿಗಳು ಹಾಗೂ ಅಧಿಕಾರಿಗಳಿಗೆ ಸಾಮರ್ಥ್ಯಾಭಿವೃದ್ಧಿಯನ್ನು ಬಲಪಡಿಸುವ ಉದ್ದೇಶದಿಂದ 2012-13ನೇ ಸಾಲಿನಿಂದ ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ) ಎಂಬ ನೂತನ ಯೋಜನೆಯನ್ನು ಕೇಂದ್ರ ಸರ್ಕಾರವು ಜಾರಿಗೊಳಿಸಿದೆ. ಮೇಲೆ ಓದಲಾದ (8)ರ ಆದೇಶದನ್ವಯ ಪಂಚಾಯತ್ ಸಶಕ್ತೀಕರಣ ಅಭಿಯಾನ್ ಯೋಜನೆಯ ಹೆಸರಿನಲ್ಲಿ ಅನುದಾನವನ್ನು ಬಿಡುಗಡೆಗೊಳಿಸಿರುತ್ತಾರೆ.

ಮೇಲೆ ಓದಲಾದ (1)ರ ಆದೇಶದಲ್ಲಿನ ಸರ್ಕಾರದ ಆದೇಶದಲ್ಲಿ ಈ ಯೋಜನೆಯನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸಲು ಆದೇಶಿಸಲಾಗಿದೆ. 2016-17ನೇ ಸಾಲಿಗೆ ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ)/ ಪಂಚಾಯತ್ ಸಶಕ್ತೀಕರಣ ಅಭಿಯಾನ್(ಪಿ.ಎಸ್.ಎ) ಯೋಜನೆಯಡಿ ಕೇಂದ್ರ ಸರ್ಕಾರವು ಉಲ್ಲೇಖ(8)ರ ಆದೇಶ ಪತ್ರದ ಮೂಲಕ ತನ್ನ ಸಂಪೂರ್ಣ ಅನುದಾನದ ಮೊತ್ತ ರೂ.1508.00 ಲಕ್ಷಗಳನ್ನು ನೇರವಾಗಿ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತಿ ರಾಜ್ ಸಂಸ್ಥೆ, ಮೈಸೂರು ಇವರಿಗೆ ಆರ್.ಟಿ.ಜಿ.ಎಸ್ ಮೂಲಕ ಉಳಿತಾಯ ಖಾತೆ ಸಂಖ್ಯೆ 64133839448(IFSC code no SBMY0041010)ಗೆ ಬಿಡುಗಡೆಗೊಳಿಸಿರುತ್ತಾರೆ. ಪ್ರಸ್ತುತ ಸಂಪೂರ್ಣ ಕೇಂದ್ರದ ವಂತಿಗೆಯಲ್ಲಿ ವರ್ಗೇತರ (NON-SC ಮತ್ತು ST) ಯೋಜನೆ, ವಿಶೇಷ ಘಟಕ (SC) ಯೋಜನೆ ಮತ್ತು ವಿಶೇಷ ಗಿರಿಜನ (ST) ಯೋಜನೆಗಳಿಗಾಗಿ 2016-17ನೇ ಸಾಲಿನ ಕೇಂದ್ರ ಸರ್ಕಾರವು ಕರ್ನಾಟಕ ರಾಜ್ಯಕ್ಕೆ ನೀಡಲು ನಿರ್ಧರಿಸಿ ಅನುಕ್ರಮವಾಗಿ ರೂ.11,64,17,600/-, ರೂ.2,44,29,600/- ಮತ್ತು ರೂ.99,52,800/- ಒಟ್ಟಾರೆ ರೂ.15,08,00,000/- ಗಳನ್ನು ಬಿಡುಗಡೆಗೊಳಿಸಿರುತ್ತಾರೆ.

ಪಂಚಾಯತಿ ರಾಜ್ ವ್ಯವಸ್ಥೆಯು ಸದೃಢ ಹಾಗೂ ಸಬಲೀಕರಣಕ್ಕಾಗಿ ಚುನಾಯಿತ ಪ್ರತಿನಿಧಿಗಳಿಗೆ ಸ್ಥಳೀಯ ಅವಶ್ಯಕತೆ, ಮೂಲಭೂತ ಸೌಲಭ್ಯ ಮತ್ತು ಅಭಿವೃದ್ಧಿ ವಿಷಯಗಳಿಗೆ ಸಂಬಂಧಿಸಿದಂತೆ ವಿಚಾರಧಾರೆಗಳನ್ನು ವೃದ್ಧಿಸುವುದು ಹಾಗೂ ಸಾಂಸ್ಥಿಕವಾಗಿ ಆಡಳಿತದಲ್ಲಿ ಭಾಗವಹಿಸಲು ಸಾಮರ್ಥ್ಯಾಭಿವೃದ್ಧಿ ತರಬೇತಿಯನ್ನು ನೀಡುವುದು ಅತ್ಯವಶ್ಯಕವಾಗಿದೆ. ಸ್ಥಳೀಯವಾಗಿ ತರಬೇತಿ ನೀಡುವ ಹಾಗೂ ಗ್ರಾಮೀಣಾಭಿವೃದ್ಧಿಗೆ ಪೂರಕವಾಗಿರುವ ಸಂಶೋಧನೆಗಳನ್ನು ನಡೆಸುವ ಉದ್ದೇಶದಿಂದ ಪ್ರತಿ ಜಿಲ್ಲಾ ಪಂಚಾಯತಿ ಕೇಂದ್ರದಲ್ಲಿ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರವನ್ನು "ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್ (ಆರ್.ಜಿ.ಪಿ.ಎಸ್.ಎ)/ ಪಂಚಾಯತ್ ಸಶಕ್ತೀಕರಣ ಅಭಿಯಾನ್(ಪಿ.ಎಸ್.ಎ) ಯೋಜನೆ"ಯಡಿ ಸ್ಥಾಪಿಸಲು ಉದ್ದೇಶಿಸಲಾಗಿದೆ. ಮೇಲೆ ಓದಲಾದ ಉಲ್ಲೇಖ(2), (3), (4), (5) & (7)ರ ಆದೇಶಗಳ ಪ್ರಕಾರ ಈಗಾಗಲೇ ರಾಜ್ಯದ ಜಿಲ್ಲಾ ಪಂಚಾಯತಿಗಳಲ್ಲಿ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರಗಳ ಸ್ಥಾಪನೆ ಉದ್ದೇಶಕ್ಕಾಗಿ ಕಳೆದ ಸಾಲುಗಳಲ್ಲಿ ಪ್ರತಿ ಜಿಲ್ಲಾ ಪಂಚಾಯತಿಗೆ ರೂ.150.00ಲಕ್ಷಗಳಂತೆ ಒಟ್ಟಾರೆ ರೂ.39.00ಕೋಟಿಗಳನ್ನು ಕರ್ನಾಟಕ ಸರ್ಕಾರ ಸ್ವಾಮ್ಯದ "ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಹಾಗೂ ಅಭಿವೃದ್ಧಿ ನಿಗಮ"ಕ್ಕೆ ಬಿಡುಗಡೆ ಮಾಡಲಾಗಿದೆ.

ಅನುಬಂಧದಲ್ಲಿ ಲಗತ್ತಿಸಿರುವ ಜಿಲ್ಲಾ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡಗಳ ಕಾಮಗಾರಿಗಳಿಗಾಗಿ 2016-17ನೇ ಸಾಲಿನಲ್ಲಿ ಒಟ್ಟಾರೆ ರೂ.6.00(ರೂಪಾಯಿ ಆರು ಕೋಟಿಗಳು ಮಾತ್ರ)ಕೋಟಿಗಳನ್ನು ಅಂತಿಮ ಅನುದಾನವಾಗಿ ಬಿಡುಗಡೆ ಮಾಡಲು ನಿರ್ಧರಿಸಿದೆ. ಅದರಂತೆ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 62 ಜಿಪಸ 2015, ಬೆಂಗಳೂರು, ದಿನಾಂಕ:05-06-2017.**

ಮೇಲಿನ ಎಲ್ಲಾ ಪ್ರಸ್ತಾವನೆಗಳನ್ನು ಗಣನೆಗೆ ತೆಗೆದುಕೊಂಡು, "ರಾಜೀವ್‌ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ)/ಪಂಚಾಯತ್ ಸಶಕ್ತೀಕರಣ ಅಭಿಯಾನ್(ಪಿ.ಎಸ್.ಎ)ಯೋಜನೆಯಡಿ "ಪಂಚಾಯತ್ ರಾಜ್ ಚುನಾಯಿತ ಪ್ರತಿನಿಧಿಗಳ ಸಾಮರ್ಥ್ಯಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವ್ಯವಸ್ಥೆಯ ಅನುಷ್ಠಾನಾಧಿಕಾರಿಗಳಿಗೆ ಮನಶ್ಚೇತನ ತರಬೇತಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತಿ ರಾಜ್ ವ್ಯವಸ್ಥೆಯ ಸದೃಢೀಕರಣ ಸಂಬಂಧದ ಕಾರ್ಯಾಗಾರ ಮತ್ತು ಸಂಪರ್ಕ ಸಭೆಗಳನ್ನು ನಡೆಸಲು ಜಿಲ್ಲಾ ಪಂಚಾಯತಿ ಕೇಂದ್ರಗಳ ವ್ಯಾಪ್ತಿಯಲ್ಲಿ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರಗಳನ್ನು ನಿರ್ಮಿಸಲು 2016-17ನೇ ಸಾಲಿನಲ್ಲಿ ಒದಗಿಸಿರುವ ಅನುದಾನದಿಂದ ರೂ.6.00(ರೂಪಾಯಿ ಆರು ಕೋಟಿಗಳು ಮಾತ್ರ)ಕೋಟಿಗಳನ್ನು "ರಾಜೀವ್‌ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ)/ ಪಂಚಾಯತ್ ಸಶಕ್ತೀಕರಣ ಅಭಿಯಾನ್(ಪಿ.ಎಸ್.ಎ) ಯೋಜನೆ"ಯ ಹೆಸರಿನಲ್ಲಿ ರಾಜ್ಯ ಸರ್ಕಾರದ ವತಿಯಿಂದ ದೇನಾ ಬ್ಯಾಂಕ್, ಇಂದಿರಾ ನಗರ ಶಾಖೆಯಲ್ಲಿ ತೆರೆಯಲಾಗಿರುವ ಉಳಿತಾಯ ಖಾತೆ ಸಂಖ್ಯೆ 052110026480 ಯಿಂದ "ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಹಾಗೂ ಅಭಿವೃದ್ಧಿ ನಿಗಮ"ದ ಕಾರ್ಪೋರೇಶನ್ ಬ್ಯಾಂಕ್, ಎಸ್.ಸಿ. ರಸ್ತೆ ಶಾಖೆಯಲ್ಲಿನ ಉಳಿತಾಯ ಖಾತೆ ಸಂಖ್ಯೆ 014401601000499(IFSC Code CORP0000144)ಗೆ ರೂ.6.00(ರೂಪಾಯಿ ಆರು ಕೋಟಿಗಳು ಮಾತ್ರ)ಕೋಟಿಗಳನ್ನು ಆನ್‌ಲೈನ್ ಮೂಲಕ ವರ್ಗಾಯಿಸಲು ಆದೇಶಿಸಲಾಗಿದೆ. ಅಂತಿಮ ಅನುದಾನವಾಗಿ ಬಿಡುಗಡೆ ಮಾಡಿರುವ ಆರು ಕೋಟಿಗಳನ್ನು ಅನುಬಂಧದಲ್ಲಿ ನಮೂದಿಸಿರುವ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರದ ಕಟ್ಟಡದ ಕಾಮಗಾರಿಗಳಿಗೆ ನಿಗಧಿಗೊಳಿಸಿರುವ ಮೊತ್ತಕ್ಕೆ ವಿನಿಯೋಗಿಸುವಂತೆ ಸೂಚಿಸಿದೆ.

**ಅನುದಾನದ ವಿನಿಯೋಗವು ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟಿರುತ್ತದೆ.**

1. ಅನುದಾನವನ್ನು ಯಾವ ಉದ್ದೇಶಗಳಿಗಾಗಿ ಬಿಡುಗಡೆಗೊಳಿಸಲಾಗಿದೆಯೋ, ಅದೇ ಉದ್ದೇಶಗಳಿಗೆ ಮಾತ್ರ ವಿನಿಯೋಗಿಸುವುದು.
2. ಕಟ್ಟಡದ ವಾಸ್ತು ವಿನ್ಯಾಸವು ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಮೈಸೂರು ಇವರ ಸಲಹೆಯಂತೆ ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಹಾಗೂ ಅಭಿವೃದ್ಧಿ ನಿಗಮವು ಸಿದ್ಧಪಡಿಸಿರುವ ಮಾದರಿಯಲ್ಲಿರಬೇಕು.
3. ಕಾಲಮಿತಿಯಲ್ಲಿ ಕಟ್ಟಡವನ್ನು ನಿರ್ಮಿಸಬೇಕು.
4. ಈ ಆದೇಶದ ಮೂಲಕ ಬಿಡುಗಡೆಗೊಳಿಸಿದ ಅನುದಾನಕ್ಕೆ ಜಿ.ಎಫ್.ಆರ್ 19-ಎ ನಿಗಧಿತ ನಮೂನೆ (ಲಗತ್ತಿಸಿದೆ) ಯಲ್ಲಿ ಹಣ ಬಳಕೆ ಪ್ರಮಾಣ ಪತ್ರವನ್ನು ನಿರ್ದೇಶಕರು (ಪಂ.ರಾಜ್-2) ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ಸಲ್ಲಿಸುವುದು. Non-Duplication, Non-Diversion ಮತ್ತು Non-Embezzlement ಪ್ರಮಾಣ ಪತ್ರಗಳನ್ನು ಸಲ್ಲಿಸುವುದು.
5. ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡಗಳ ಕಾಮಗಾರಿಗಳನ್ನು ಎಂ.ಜಿ.ಎನ್.ಆರ್.ಇ.ಜಿ.ಎಸ್ ಯೋಜನೆಯಡಿಯ ಗುಣಮಟ್ಟ ನಿಯಂತ್ರಣ ವಿಭಾಗದಿಂದ ಗುಣಮಟ್ಟ ಪರಿಶೀಲನೆಯನ್ನು ಮಾಡಿಸುವುದು.
6. ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡಗಳ ಕಾಮಗಾರಿಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸುವುದು.
7. ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್ (ಆರ್.ಜಿ.ಪಿ.ಎಸ್.ಎ)/ಪಂಚಾಯತ್ ಸಶಕ್ತೀಕರಣ ಅಭಿಯಾನ್(ಪಿ.ಎಸ್.ಎ) ಯೋಜನೆಯ ಕೇಂದ್ರ ಸರ್ಕಾರ ಪ್ರಾಯೋಜಿತ ತೃತೀಯ ಮಧ್ಯವರ್ತಿ(Third Party Evaluation)ಗಳಿಂದ ಎಲ್ಲಾ ತರಬೇತಿ ಕಾರ್ಯಕ್ರಮಗಳನ್ನು ಪರಿವೀಕ್ಷಿಸಲು ಹಾಗೂ ಮೌಲ್ಯಮಾಪನ ಮಾಡಲು ಆಗಮಿಸುವರು.
8. ಸಂಪೂರ್ಣವಾಗಿ ನಿರ್ಮಾಣಗೊಂಡಿರುವ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಗೆ ಹಸ್ತಾಂತರಿಸಲು ಕೂಡಲೇ ಕ್ರಮವಹಿಸುವುದು.

ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಎಫ್‌ಡಿ/1/ಟಿಎಫ್.ಪಿ/2017 ದಿನಾಂಕ:05-04-2017ರಲ್ಲಿ ಆಡಳಿತ ಇಲಾಖೆಯ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿದ ಅಧಿಕಾರದನ್ವಯ ಈ ಆದೇಶವನ್ನು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಸಹಿ) 2/6/17
ನಿರ್ದೇಶಕರು (ಪಂ.ರಾಜ್-2)
ಗ್ರಾ.ಅ. & ಪಂ.ರಾಜ್ ಇಲಾಖೆ

(ಸಹಿ) 5/6/2017
(ಪಿ.ದೇವಸಹಾಯಂ)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಇವರಿಗೆ,

1. ಮಹಾಲೇಖಪಾಲರು (ಎ ಅಂಡ್ ಇ) ...

2. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ), ಕರ್ನಾಟಕ, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ), ಕರ್ನಾಟಕ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಮಂಡ್ಯ, ಧಾರವಾಡ, ಕೊಪ್ಪಳ ಹಾಗೂ ಬೆಂಗಳೂರು ಗ್ರಾಮಾಂತರ, ಜಿಲ್ಲಾ ಪಂಚಾಯತಿಗಳು.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಹಾಗೂ ಅಭಿವೃದ್ಧಿ ನಿಗಮ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ಸರ್ಕಲ್, ಬೆಂಗಳೂರು.
6. ಇಲಾಖಾ ವೆಬ್‌ಸೈಟ್/ಕರ್ನಾಟಕ ವಿಕಾಸ ಮಾಸ ಪತ್ರಿಕೆ.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತಿ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ. ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
4. ನಿರ್ದೇಶಕರು (ಪಂ.ರಾಜ್-2), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

# ಅನುಬಂಧ-1

<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 62 ಜಿಪಸ 2015, ಬೆಂಗಳೂರು, ದಿನಾಂಕ:05-06-2017.</u>

(ರೂ.ಲಕ್ಷಗಳಲ್ಲಿ)

| ಕ್ರ.ಸಂ. | ಜಿಲ್ಲೆಗಳ ಹೆಸರು | ಅನುದಾನದ ಮೊತ್ತ |
|---|---|---|
| 1 | ಕೊಪ್ಪಳ | 150.00 |
| 2 | ಧಾರವಾಡ | 150.00 |
| 3 | ಬೆಂಗಳೂರು ಗ್ರಾಮಾಂತರ | 150.00 |
| 4 | ಮಂಡ್ಯ | 150.00 |
| | ಒಟ್ಟು | **600.00** |

7/6/2017

Under Secretary to Govt. (ZP)
Rural Dev. & Pan.Raj Dept.
Karnataka Govt. Secretariat